ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯ ಮಂತ್ರಿಗಳು) :

ಅ) 25

ಆ) 1. ಚುನಾಯಿತಗೊಂಡ ದಿನಾಂಕ : 8-7-1988

2. ನಿವೃತ್ತರಾಗುವ ದಿನಾಂಕ : 7-7-1994

ಇ) ಹೌದು

ಈ) ಎಲ್ಲಾ ಕ್ಷೇತ್ರಗಳಿಗೆ ಹಿಂದಿನ ಚುನಾವಣೆ 1988ರಲ್ಲಿ ನಡೆಸಿದ್ದಕ್ಕಾಗಿ ಈ ರೀತಿಯಾಗಿದೆ. ಇದರಲೇನಾದರು ಬದಲಾವಣೆ ಆಗಬೇಕಾಗಿದ್ದರೆ, ಚುನಾವಣಾ ಆಯೋಗ ಈ ವಿಷಯದಲ್ಲಿ ತೀರ್ಮಾನ ತೆಗೆದುಕೊಳ್ಳಬೇಕಾಗುತ್ತೆ.

ಹುಬ್ಬಳ್ಳಿ ಹಾಗೂ ಗುಲ್ಬರ್ಗದಲ್ಲಿ ಕರ್ನಾಟಕದ ಉಚ್ಚ ನ್ಯಾಯಾಲಯ ಪೀಠದ ಸ್ಥಾಪನೆ

360 - ಶ್ರೀ ಜಿ. ಪುಟ್ಟಸ್ವಾಮಿ ಗೌಡ (ಹೊಳೆನರಸೀಪುರ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ಹಾಗೂ ಗುಲ್ಬರ್ಗದಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ಪೀಠವನ್ನು ಸ್ಥಾಪಿಸುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಇ) ಈ ಪೀಠವನ್ನು ಯಾವಾಗ ಮೇಲ್ಕಂಡ ಸ್ಥಳದಲ್ಲಿ ಸ್ಥಾಪಿಸಲಾಗುವುದು?

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯ ಮಂತ್ರಿಗಳು) :

ಅ) ಹೌದು

ಆ) ಕೇಂದ್ರ ಸರ್ಕಾರವು ಸಲಹೆ ಮಾಡಿರುವಂತೆ, ಸದರಿ ಪ್ರಸ್ತಾವನೆಗೆ ಉಚ್ಚ ನ್ಯಾಯಾಲಯದ ಸಹಮತಿಯನ್ನು ಕೋರಲಾಗಿದೆ. ಉಚ್ಚ ನ್ಯಾಯಾಲಯವು ಸದರಿ ವಿಷಯವನ್ನು ಪೂರ್ಣ ಪೀಠದ ಮುಂದಿರಿಸಿ ನಿರ್ಣಯವನ್ನು ಸರ್ಕಾರಕ್ಕೆ ತಿಳಿಸುವುದಾಗಿ ತಿಳಿಸಿರುತ್ತಾರೆ. ಪೂರ್ಣ ಪೀಠದ ನಿರ್ಣಯವನ್ನು ಎದುರು ನೋಡಲಾಗಿದೆ.

ಇ) ಪ್ರಸ್ತಾವನೆಯು ಉಚ್ಚ ನ್ಯಾಯಾಲಯದ ಪರಿಶೀಲನೆಯಲ್ಲಿರುವುದರಿಂದ ಇಂತಿಷ್ಟೇ ಸಮಯದಲ್ಲಿ ಪೀಠವನ್ನು ಸ್ಥಾಪಿಸಲಾಗುವುದು ಎಂದು ಹೇಳಲು ಸಾಧ್ಯವಾಗುವುದಿಲ್ಲ.

ರಾಜ್ಯದಲ್ಲಿ ಯುವ ವಕೀಲರಿಗೆ ಸ್ಟೈಪೆಂಡ್

89 - ಶ್ರೀ ಜಿ. ಪುಟ್ಟಸ್ವಾಮಿ ಗೌಡ (ಹೊಳೇನರಸೀಪುರ) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸದಾಗಿ ರಾಜ್ಯದಲ್ಲಿ ವಕೀಲ ವೃತ್ತಿಯನ್ನು ಪ್ರಾರಂಭಿಸುವ ಯುವ ವಕೀಲರಿಗೆ ಸ್ಟೈಪಂಡ್ ಮಂಜೂರು ಮಾಡಲು ಸರ್ಕಾರವು ಘೋಷಣೆ ನೀಡಿದೆಯೇ?

ಆ) ಹಾಗಿದ್ದರೆ, ಈ ಸ್ಟೈಪಂಡ್ ಪಡೆಯಲು ಎಷ್ಟು ವಕೀಲರು ಅರ್ಹರಾಗಿದ್ದಾರೆ?

ಇ) ಸ್ಟೈಪಂಡ್‌ನ ಮೊತ್ತ?

ಈ) 1993-94ನೇ ಸಾಲಿನಲ್ಲಿ ಎಷ್ಟು ಯುವ ವಕೀಲರಿಗೆ ಸ್ಟೈಪಂಡ್ ನೀಡಲಾಗುವುದು?

ಶ್ರೀ ಹಾರ್ನಳ್ಳಿ ರಾಮಸ್ವಾಮಿ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ) ರಾಜ್ಯದ ಯುವ ವಕೀಲರಿಗೆ ಸ್ಟೈಪಂಡ್ ನೀಡುವ ವಿಷಯವನ್ನು ಪರಿಶೀಲಿಸಲಾಗುತ್ತಿದೆ.

ಆ) ಸರ್ಕಾರದ ಪರಿಶೀಲನೆಯಲ್ಲಿರುವುದರಿಂದ, ಉದ್ಭವಿಸುವುದಿಲ್ಲ

ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯವರ ಜೊತೆ ಶಾಮೀಲಾಗಿ ವಾಣಿಜ್ಯ ಸಂಸ್ಥೆಗಳಲ್ಲಿರುವ ವಿದ್ಯುತ್ ಮಾಪಕಗಳನ್ನು ಒಡೆದು ನೋಡುತ್ತಿರುವುದರ ಬಗ್ಗೆ

677 - ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ) : ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯ ಅಧಿಕಾರಿಗಳ ಹಾಗೂ ಸಿಬ್ಬಂದಿ ವರ್ಗದವರ ಜತೆ ಶಾಮೀಲಾಗಿ, ವಾಣಿಜ್ಯ ಸಂಸ್ಥೆಗಳಲ್ಲಿರುವ ವಿದ್ಯುತ್ ಮಾಪಕಗಳನ್ನು ಒಡೆದು ನೋಡುತ್ತಿರುವುದು (ಟ್ಯಾಂಪರ್) ನಿಜವೇ?

ಆ) ಹಾಗಿದ್ದಲ್ಲಿ, ದಾಖಲಾದ ಮೊಕದ್ದಮೆಗಳ ಸಂಖ್ಯೆ ಎಷ್ಟು ಹಾಗೂ ತೆಗೆದುಕೊಂಡು ಕ್ರಮ ಏನು?

ಶ್ರೀ ಎಸ್.ಎಂ. ಕೃಷ್ಣ (ಉಪ ಮುಖ್ಯ ಮಂತ್ರಿಗಳು) :

ಅ) ಇಲ್ಲ.

ಆ) 'ಅ' ಪ್ರಶ್ನೆಗೆ ನೀಡಿರುವ ಉತ್ತರದಿಂದ ಈ ಪ್ರಶ್ನೆಗೆ ಉತ್ತರ ಉದ್ಭವಿಸುವುದಿಲ್ಲ.

ಆಲೂರು ತಾಲ್ಲೂಕ್ ಮಗ್ಗೆ ಕೆ.ಇ.ಬಿ.ಗೆ ಟ್ರಾನ್ಸ್‌ಫಾರ್ಮರ್ ಇನ್‌ಸ್ಟಾಲ್ ಮಾಡುವ ಬಗ್ಗೆ.

172 - ಶ್ರೀ ಬಿ.ಆರ್. ಗುರುದೇವ (ಸಕಲೇಶಪುರ) : ಮಾನ್ಯ ಉಪಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆಲೂರು ತಾಲ್ಲೂಕ್ ಮಗ್ಗೆ ಕೆ.ಇ.ಬಿ.ಯಲ್ಲಿದ್ದ ಟ್ರಾನ್ಸ್‌ಫಾರ್ಮರ್ ಕೆಟ್ಟು ಹೋಗಿದ್ದು ಸುಮಾರು 90 ಗ್ರಾಮಗಳಿಗೆ ವಿದ್ಯುಚ್ಛಕ್ತಿ ಸರಬರಾಜು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಅದನ್ನು ಸರಿಪಡಿಸಲು ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಎಸ್.ಎಂ. ಕೃಷ್ಣ (ಉಪ ಮುಖ್ಯಮಂತ್ರಿಗಳು) :

ಅ) ಹೌದು

ಆ) ಒಂದು ಹೆಚ್ಚಿನ ಸಾರ್ಥ್ಯದ ಅಂದರೆ 6.3 ಎಂ.ವಿ.ಎ. ಸಾಮರ್ಥ್ಯದ ಪವರ್ ಟ್ರಾನ್ಸ್ ಫಾರ್ಮರನ್ನು ವಿಫಲಗೊಂಡಿರುವ 3 ಎಂ.ವಿ.ಎ. ಸಾಮರ್ಥ್ಯದ ಪವರ್ ಟ್ರಾನ್ಸ್ ಫಾರ್ಮರ್ ಸ್ಥಾನದಲ್ಲಿ ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ, ಅಲ್ಲದೇ ಮಗ್ಗೆಯ 66.11 ಕೆ.ವಿ. ವಿದ್ಯುತ್ ಉಪ ಕೇಂದ್ರದಿಂದ ವಿದ್ಯುತ್ ಸರಬರಾಜು ಪಡೆಯುತ್ತಿದ್ದ ಆಲೂ ತಾಲ್ಲೂಕಿನ 90 ಗ್ರಾಮಗಳಿಗೆ ಹಾಸನದಲ್ಲಿರುವ 110 ಕೆ.ವಿ. ಮತ್ತು ಸಕಲೇಶಪುರದಲ್ಲಿರುವ 66 ಕೆ.ವಿ. ವಿದ್ಯುತ್ ಉಪಕೇಂದ್ರಗಳಿಂದ ಈಗ ವಿದ್ಯುತ್ ಸರಬರಾಜನ್ನು ವ್ಯವಸ್ಥೆ ಮಾಡಲಾಗಿದೆ.

ಸಕಲೇಶಪುರ ಕೆ.ಇ.ಬಿ. ಕಛೇರಿಯಲ್ಲಿ ಸಿಬ್ಬಂದಿ ಕೊರತೆ

171 - ಶ್ರೀ ಬಿ.ಆರ್. ಗುರುದೇವ (ಸಕಲೇಶಪುರ) : ಮಾನ್ಯ ಇಂಧನ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಕಲೇಶಪುರ ಕೆ.ಇ.ಬಿ. ಕಛೇರಿಯಲ್ಲಿ ಸಿಬ್ಬಂದಿಯ ಕೊರತೆಯಿಂದಾಗಿ ಕೆಲಸಗಳು ಸ್ಥಗಿತಗೊಂಡಿದ್ದು ಸಾರ್ವಜನಿಕರಿಗೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?